# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು – 572 103

ಸಂಖ್ಯೆ: ತುವಿ:ಶೈ.ವಿ:UG:CE:2026–27: / 203 ದಿನಾಂಕ:16.04.2026

## ಅಧಿಸೂಚನೆ

ವಿಷಯ : 2026–27 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಅಧಿಸೂಚಿಸಿರುವ ಕುರಿತು.

ಉಲ್ಲೇಖ :1) ಸರ್ಕಾರದ ಆದೇಶ ಸಂಖ್ಯೆ:ಸಂ.ಇಡಿ 212 ಯುಎನ್ಇ 2024, ದಿನಾಂಕ:07.11.2025.
2) ವಿವಿ ಅಧಿಸೂಚನೆ ಪತ್ರದ ಸಂಖ್ಯೆ:ತು.ವಿ:ಶೈ.ವಿ:CE:2026–27/29ದಿನಾಂಕ:31.03.2026.
3) ವಿವಿ ಶೈಕ್ಷಣಿಕ ವೇಳಾಪಟ್ಟಿ ಸಮಿತಿಯ ಸಭಾ ನಡಾವಳಿಗಳ ದಿನಾಂಕ:09.04.2026.
4) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:14.04.2026 (ಕಂಡಿಕೆ–16)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (01)ರ ಸರ್ಕಾರದ ಆದೇಶವನ್ನು ಅನುಸರಿಸಿ 2026–27ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ರಚಿಸುವ ಕುರಿತು ಉಲ್ಲೇಖ (02)ರಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಇದರಂತೆ, ಉಲ್ಲೇಖ (03) ರಲ್ಲಿ ಸ್ನಾತಕ ಪದವಿ ಕೋರ್ಸ್‌ಗಳ ಶೈಕ್ಷಣಿಕ ವೇಳಾಪಟ್ಟಿ ಸಮಿತಿಯು ಸಭೆ ಸೇರಿ ವೇಳಾಪಟ್ಟಿಯನ್ನು ಸಿದ್ದಪಡಿಸಿ ಸಭಾ ನಡಾವಳಿಗಳನ್ನು ಸಲ್ಲಿಸಿದ್ದು, ಉಲ್ಲೇಖ (04)ರ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ 2026–27ನೇ ಶೈಕ್ಷಣಿಕ ಸಾಲಿನ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ನಿಗಧಿಪಡಿಸಿ ಅಧಿಸೂಚಿಸಲಾಗಿದೆ.

### (2026–27) ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿ (ಬಿ.ವಿ.ಎ ಹೊರತುಪಡಿಸಿ)

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ದಿನಾಂಕ |
|---|---|---|
| 1. | Iನೇ ಸೆಮಿಸ್ಟರ್‌ನ ಪ್ರವೇಶಾತಿ ಪ್ರಾರಂಭದ ದಿನಾಂಕ | 21.04.2026 |
| 2. | Iನೇ ಸೆಮಿಸ್ಟರ್‌ಗೆ ದಂಡಶುಲ್ಕವಿಲ್ಲದೆ ಪ್ರವೇಶಾತಿಯ ಕೊನೆಯ ದಿನಾಂಕ | 22.06.2026 |
| 3. | Iನೇ ಸೆಮಿಸ್ಟರ್‌ನ ದಂಡಶುಲ್ಕದೊಂದಿಗೆ ಪ್ರವೇಶಾತಿಯ ಕೊನೆಯ ದಿನಾಂಕ | 04.07.2026 |
| 4. | ಪ್ರವೇಶಾತಿ ತಃಖ್ತೆಯನ್ನು ತ್ರಿಪ್ರತಿಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಹಾಗೂ ಆನ್‌ಲೈನ್ ಮೂಲಕ (Submit to University in UUCMS) ಸಲ್ಲಿಸಬೇಕಾದ ಕೊನೆಯ ದಿನಾಂಕ | 10.08.2026 |
| 5. | I, III & Vನೇ ಸೆಮಿಸ್ಟರ್‌ನ ತರಗತಿಗಳ ಪ್ರಾರಂಭ ದಿನಾಂಕ | 01.08.2026 |
| 6. | ಪರೀಕ್ಷಾ ಅಧಿಸೂಚನೆ | 27.10.2026 |
| 7. | I, III & Vನೇ ಸೆಮಿಸ್ಟರ್‌ನ ತರಗತಿಗಳ ಕೊನೆಯ ದಿನಾಂಕ | 25.11.2026 |
| 8. | ಅಧ್ಯಾಪಕರ ರಜೆ | 26.11.2026 |
| 9. | I, III, Vನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಪ್ರಾರಂಭದ ದಿನಾಂಕ | 30.11.2026 |
| 10. | I, III, Vನೇ ಸೆಮಿಸ್ಟರ್ ಪ್ರಾಯೋಗಿಕ ಮತ್ತು ಸೈದ್ಧಾಂತಿಕ ಪರೀಕ್ಷೆಗಳ ಮುಕ್ತಾಯ ದಿನಾಂಕ (ಮೌಲ್ಯಮಾಪನವೂ ಸೇರಿದಂತೆ) | 17.01.2027 |
| 11. | II, IV,VI ನೇ ಸೆಮಿಸ್ಟರ್ ತರಗತಿಗಳ ಪುನರಾರಂಭ ದಿನಾಂಕ | 18.01.2027 |
| 12. | ಪರೀಕ್ಷಾ ಅಧಿಸೂಚನೆ | 15.04.2027 |
| 13. | II, IV,VI ನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ ದಿನಾಂಕ | 13.05.2027 |
| 14. | ಅಧ್ಯಾಪಕರ ರಜೆ | 14.05.2027 |
| 15. | II, IV & VI ನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಪ್ರಾರಂಭ ದಿನಾಂಕ | 17.05.2027 |
| 16. | II, IV & VI ನೇ ಸೆಮಿಸ್ಟರ್ ಪ್ರಾಯೋಗಿಕ ಮತ್ತು ಸೈದ್ಧಾಂತಿಕ ಪರೀಕ್ಷೆಗಳ ಮುಕ್ತಾಯದ ದಿನಾಂಕ (ಮೌಲ್ಯಮಾಪನವೂ ಸೇರಿದಂತೆ) | 30.06.2027 |
| 17. | 2027–28 ನೇ ಸಾಲಿನ ವಿವಿಧ ಸೆಮಿಸ್ಟರ್ ಶೈಕ್ಷಣಿಕ ಸಾಲಿನ ತರಗತಿಗಳ ಪ್ರಾರಂಭದ ದಿನಾಂಕ | 01.07.2027 |

## (2026–27) ನೇ ಸಾಲಿನ ಸ್ನಾತಕ ಬಿ.ವಿ.ಎ ಪದವಿಯ ಶೈಕ್ಷಣಿಕ ವೇಳಾಪಟ್ಟಿ

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ದಿನಾಂಕ |
|---|---|---|
| 1. | Iನೇ ಸೆಮಿಸ್ಟರ್‌ನ ಪ್ರವೇಶಾತಿ ಪ್ರಾರಂಭದ ದಿನಾಂಕ | 21.04.2026 |
| 2. | Iನೇ ಸೆಮಿಸ್ಟರ್‌ಗೆ ದಂಡಶುಲ್ಕವಿಲ್ಲದೆ ಪ್ರವೇಶಾತಿಯ ಕೊನೆಯ ದಿನಾಂಕ | 31.07.2026 |
| 3. | Iನೇ ಸೆಮಿಸ್ಟರ್‌ನ ದಂಡಶುಲ್ಕದೊಂದಿಗೆ ಪ್ರವೇಶಾತಿಯ ಕೊನೆಯ ದಿನಾಂಕ | 14.08.2026 |
| 4. | ಪ್ರವೇಶಾತಿ ತಃಖ್ತೆಯನ್ನು ತ್ರಿಪ್ರತಿಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಹಾಗೂ ಆನ್‌ಲೈನ್ ಮೂಲಕ (Submit to University in UUCMS) ಸಲ್ಲಿಸಬೇಕಾದ ಕೊನೆಯ ದಿನಾಂಕ | 12.10.2026 |
| 5. | I, III V & VIIನೇ ಸೆಮಿಸ್ಟರ್‌ನ ತರಗತಿಗಳ ಪ್ರಾರಂಭ ದಿನಾಂಕ | 30.09.2026 |
| 6. | ಪರೀಕ್ಷಾ ಅಧಿಸೂಚನೆ | 21.12.2026 |
| 7. | I, III V & VIIನೇ ಸೆಮಿಸ್ಟರ್‌ನ ತರಗತಿಗಳ ಕೊನೆಯ ದಿನಾಂಕ | 21.01.2027 |
| 8. | ಅಧ್ಯಾಪಕರ ರಜೆ | 22.01.2027 |
| 9. | I, III V & VIIನೇ ಸೆಮಿಸ್ಟರ್ ಪ್ರಾಯೋಗಿಕ ಮತ್ತು ಸೈದ್ಧಾಂತಿಕ ಪರೀಕ್ಷಾ ಕಾರ್ಯ (ಮೌಲ್ಯಮಾಪನವೂ ಸೇರಿದಂತೆ) | 23.01.2027 ರಿಂದ 23.02.2027 |
| 10. | II, IV,VI & VIII ನೇ ಸೆಮಿಸ್ಟರ್ ತರಗತಿಗಳ ಪುನರಾರಂಭ ದಿನಾಂಕ | 24.02.2027 |
| 11. | ಪರೀಕ್ಷಾ ಅಧಿಸೂಚನೆ | 17.05.2027 |
| 12. | II, IV,VI & VIII ನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ ದಿನಾಂಕ | 17.06.2027 |
| 13. | ಅಧ್ಯಾಪಕರ ರಜೆ | 18.06.2027 |
| 14. | II, IV,VI & VIII ನೇ ಸೆಮಿಸ್ಟರ್ ಪ್ರಾಯೋಗಿಕ ಮತ್ತು ಸೈದ್ಧಾಂತಿಕ ಪರೀಕ್ಷಾ ಕಾರ್ಯ (ಮೌಲ್ಯಮಾಪನವೂ ಸೇರಿದಂತೆ) | 19.06.2027 ರಿಂದ 19.07.2027 |
| 15. | 2027–28 ನೇ ಸಾಲಿನ ವಿವಿಧ ಸೆಮಿಸ್ಟರ್ ಶೈಕ್ಷಣಿಕ ಸಾಲಿನ ತರಗತಿಗಳ ಪ್ರಾರಂಭದ ದಿನಾಂಕ | 20.07.2027 |

### ಸೂಚನೆಗಳು

1. ವಿಶ್ವವಿದ್ಯಾನಿಲಯದಿಂದ ಸಂಯೋಜನೆ ಪಡೆಯದ ಯಾವುದೇ ಕಾಲೇಜು ವಿದ್ಯಾರ್ಥಿಗಳನ್ನು ಕೋರ್ಸು/ ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ ಮತ್ತು ಪಠ್ಯಕ್ರಮ ಹಾಗೂ ವಿನಿಯಮ ಅನುಮೋದನೆಗೊಳ್ಳದ ಕೋರ್ಸು/ ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ.
2. ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿನಿಯಮಕ್ಕನುಗುಣವಾಗಿ ಹಾಗೂ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ವಯ ಮಾಡಿಕೊಳ್ಳುವುದು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ಅಥವಾ ಸಂಸ್ಥೆಯ ಮುಖ್ಯಸ್ಥರ ಪೂರ್ಣ ಜವಾಬ್ದಾರಿಯಾಗಿರುತ್ತದೆ ಮತ್ತು ನಿಯಮಗಳಿಗೆ ವಿರುದ್ಧವಾಗಿ ಮಾಡಿಕೊಳ್ಳಲಾಗುವ ಪ್ರವೇಶಾತಿಯು ಅಮಾನ್ಯವಾಗಿರುತ್ತದೆ.
3. ಹೊರ ರಾಜ್ಯದಲ್ಲಿ ದ್ವಿತೀಯ ಪಿ.ಯು.ಸಿ. ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಹತಾ ಪ್ರಮಾಣ ಪತ್ರಕ್ಕಾಗಿ ನಿಗಧಿತ ನಮೂನೆಯೊಂದಿಗೆ ಅಂಕಪಟ್ಟಿಗಳು, ಕ್ಯುಮ್ಯುಲೇಟಿವ್ ರೆಕಾರ್ಡ್ ಹಾಗೂ ಇತರೆ ಅವಶ್ಯ ದಾಖಲಾತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸುವುದು. ಅರ್ಹತಾ ಪ್ರಮಾಣ ಪತ್ರ ಒದಗಿಸದ ಹೊರ ರಾಜ್ಯದ ವಿದ್ಯಾರ್ಥಿಗಳನ್ನು ಯಾವುದೇಕಾರಣಕ್ಕೂ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ.

   ಹೊರ ರಾಜ್ಯ/ ದೇಶಗಳ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳುವಾಗ ಈ ಕೆಳಕಂಡ ದಾಖಲಾತಿಗಳನ್ನು ಪಡೆಯತಕ್ಕದ್ದು.

   ಎ. ಅರ್ಹತಾ ಪ್ರಮಾಣ ಪತ್ರ

   ಬಿ. ವಿದ್ಯಾರ್ಥಿಯ ವೀಸಾ

   ಸಿ. ಸಕ್ಷಮ ಪಾಧಿಕಾರವು ನೀಡಿರುವA.I.D.S. ಮುಕ್ತ ಪ್ರಮಾಣ ಪತ್ರ
4. ಎರಡು ವರ್ಷಗಳ ಪಿ.ಯು.ಸಿ. ಕೋರ್ಸು ಅಥವಾ ತತ್ಸಮಾನ ಕೋರ್ಸನ್ನು ಪೂರ್ಣಗೊಳಿಸದ (10+2) ಯಾವುದೇ ವಿದ್ಯಾರ್ಥಿಯು ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ಪಡೆಯಲು ಅರ್ಹನಲ್ಲ.

5. ವಿಶ್ವವಿದ್ಯಾನಿಲಯ/ರಾಜ್ಯ ಸರ್ಕಾರವು ನಿಗದಿಪಡಿಸಿರುವ ಪ್ರವೇಶ ಮಿತಿಗಿಂತ ಹೆಚ್ಚಾಗಿ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ಮಾಡಿಕೊಂಡಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 59(18) ರನ್ವಯ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.
6. ವಿದ್ಯಾರ್ಥಿಯು ಪ್ರವೇಶ ಪಡೆದಿರುವ ಕೋರ್ಸಿಗೆ ಸಂಬಂಧಿಸಿದ ವಿನಿಯಮ, ಕನಿಷ್ಠ ಹಾಜರಾತಿ ಮತ್ತು ಪರೀಕ್ಷಾ ಸ್ವರೂಪವನ್ನು ಪ್ರತಿ ವರ್ಷ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು ಹಾಗೂ ಅನುಸರಣಾ ವರದಿಯನ್ನು ಪ್ರವೇಶ ಪಟ್ಟಿಯೊಂದಿಗೆ ಸಲ್ಲಿಸುವುದು.
7. ವಿಶ್ವವಿದ್ಯಾನಿಲಯದಿಂದ ಪೂರ್ವಾನುಮತಿ ಪಡೆಯದೇ ಯಾವುದೇ ವರ್ಗಾವಣೆ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದಲ್ಲ.
8. ಕಾಲೇಜುಗಳು ಆಯಾ ವರ್ಷಗಳಲ್ಲಿ ನಿಗದಿಪಡಿಸುವ ಕೊನೆಯ ದಿನಾಂಕದೊಳಗೆ ಎಲ್ಲಾ ಪ್ರವೇಶಾತಿಗಳನ್ನು ಮಾಡಿಕೊಳತಕ್ಕದ್ದು. ಯಾವುದೇ ಕಾರಣಕ್ಕೂ ವಿಶ್ವವಿದ್ಯಾನಿಲಯವು ನಿಗದಿ ಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಂಡಲ್ಲಿ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.
9. **ಪ್ರಾಂಶುಪಾಲರು/ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಶುಲ್ಕ ಪಾವತಿ ರಶೀದಿಯೊಂದಿಗೆ ತ್ರಿಪ್ರತಿಗಳಲ್ಲಿ ದಿನಾಂಕ 10.08.2026 ಹಾಗೂ ಬಿ.ವಿ.ಎ ಪದವಿ ಕೋರ್ಸಿನ ಪ್ರವೇಶಾತಿ ಪಟ್ಟಿಯನ್ನು 12.10.2026 ರೊಳಗೆ ಮಾನ್ಯ ಕುಲಸಚಿವರು (ದ್ವಿಪ್ರತಿ) ಹಾಗೂ ಹಣಕಾಸು ಅಧಿಕಾರಿಗಳು (ಒಂದು ಪ್ರತಿ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸುವುದು. ಕಾಲೇಜಿನ ಅಧಿಕಾರಿಗಳು ಶೈಕ್ಷಣಿಕ ವಿಭಾಗಕ್ಕೆ ನಿಗದಿತ ದಿನಾಂಕದಂದು ಎಲ್ಲಾ ಅವಶ್ಯ ದಾಖಲಾತಿಗಳನ್ನು ಒದಗಿಸುವುದು. ಪ್ರಾಂಶುಪಾಲರು/ ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಎಲ್ಲಾ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿಶ್ವವಿದ್ಯಾನಿಲಯದ ವಿನಿಯಮಗಳಿಗನುಗುಣವಾಗಿ ಮಾಡಿಕೊಳ್ಳಲಾಗಿದೆ ಎಂದು ದೃಢೀಕರಿಸುವುದು ಹಾಗೂ ಅನುಸರಣಾ ವರದಿಯನ್ನು ಅಧಿಸೂಚನೆಯ ಪ್ರಕರಣ 06ರನ್ವಯ ಸಲ್ಲಿಸುವುದು.**
10. ಹೊರ ರಾಜ್ಯದಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳ ಪ್ರವೇಶಾತಿ ಪಟ್ಟಿಯನ್ನುಅರ್ಹತಾ ಪ್ರಮಾಣ ಪತ್ರ ಹಾಗೂ ಇತರೆ ಅಗತ್ಯ ದಾಖಲಾತಿಗಳೊಂದಿಗೆ ಪ್ರತ್ಯೇಕವಾಗಿ ಸಲ್ಲಿಸತಕ್ಕದ್ದು. ಇಂತಹ ವಿದ್ಯಾರ್ಥಿಗಳ ಕ್ರಮ ಸಂಖ್ಯೆಯನ್ನು ಕರ್ನಾಟಕದೊಳಗೆ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳ ನಂತರ ನಿರಂತರವಾಗಿ ನೀಡತಕ್ಕದ್ದು.
11. ಶೈಕ್ಷಣಿಕ ವೇಳಾಪಟ್ಟಿಯನ್ನು ಎಲ್ಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರುವುದು.
12. **ಶೈಕ್ಷಣಿಕ ವೇಳಾಪಟ್ಟಿಯಲ್ಲಿನ ಯಾವುದೇ ದಿನಾಂಕವು ರಜಾ ದಿನವೆಂದು ಘೋಷಿಸಲ್ಪಟ್ಟಲ್ಲಿ ಕಾರ್ಯಕ್ರಮಗಳು ಸದರಿ ದಿನಾಂಕದ ನಂತರದ ಕರ್ತವ್ಯದ ದಿನ ಪ್ರಾರಂಭಗೊಳ್ಳುತ್ತದೆ.**
13. ಪ್ರವೇಶಾತಿ ಪಟ್ಟಿಯನ್ನು ತಡವಾಗಿ ಸಲ್ಲಿಸುವುದು ವಿಶ್ವವಿದ್ಯಾನಿಲಯವು ನಿಗದಿಪಡಿಸುವ ದಂಡನೆಗೆ ಒಳಪಟ್ಟಿರುತ್ತದೆ.

**ಕುಲಸಚಿವರು** Dc 15/04/26

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

**ಪ್ರಾಂಶುಪಾಲರುಗಳು, ಎಲ್ಲಾ ಸಂಯೋಜಿತ/ ಘಟಕ / ಸ್ವಾಯತ್ತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.**

**ಪ್ರತಿಗಳು:-**

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಡೀನರು, ಕಲಾ ವಿಜ್ಞಾನ, ವಾಣಿಜ್ಯ ಮತ್ತು ಶಿಕ್ಷಣ ನಿಕಾಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
5. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
6. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
7. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
8. ಎನ್.ಎಸ್.ಎಸ್. ಕೋ-ಆರ್ಡಿನೇಟರ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
9. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.
10. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
11. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
12. ಕಚೇರಿ ಪ್ರತಿ.